ಬಸವನಬಾಗೇವಾಡಿಯಲ್ಲಿ ಟಿ.ಸಿ.ಹೆಚ್. ಕಾಲೇಜನ್ನು ಮಂಜೂರು ಮಾಡುವುದು

3517(4062) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೇವಾಡಿ ಮತಕ್ಷೇತ್ರದ ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಪುನರ್ವಸತಿ ಕೇಂದ್ರಕ್ಕೆ ಟಿ.ಸಿ.ಹೆಚ್. ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಆ) ಇದ್ದಲ್ಲಿ, ಯಾವಾಗ ಮಾಡಲಾಗುವುದು?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಬಸವನಬಾಗೇವಾಡಿ ತಾಲ್ಲೂಕಿನಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವುದು

3518(4063) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮುಳುಗಡೆಯಾದ ಬಸವನಬಾಗೇವಾಡಿ ಕ್ಷೇತ್ರದ ಬಳೂತಿ, ಬೆಳ್ಳುಬ್ಬಿ, ದೇವಣಗಣ್ಣೂರ, ಬಬಲಾದಿ, ಕೃಷ್ಣನಗರ ಮತ್ತು ಎಂಬತ್‌ನಾಳ ಪ್ರದೇಶಗಳಲ್ಲಿ ಸರ್ಕಾರಿ ಪ್ರೌಢಶಾಲೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ವಿಚಾರದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಬಂದಿದೆ.

2003–04ನೇ ಸಾಲಿನಲ್ಲಿ ಅಗತ್ಯತೆಗೆ ಅನುಗುಣವಾಗಿ ಬಳೂತಿ ಪುನರ್ ವಸತಿ ಕೇಂದ್ರಕ್ಕೆ ಪ್ರೌಢಶಾಲೆಯನ್ನು ಮಂಜೂರು ಮಾಡಿದೆ.

ವಿಜಾಪುರ ಜಿಲ್ಲೆಯಲ್ಲಿನ ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮುಳುಗಡೆ ಪ್ರದೇಶದ ಜನರಿಗೆ ಮನೆಗಳನ್ನು ನೀಡುವುದು

3519(4064) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವಿಜಾಪುರ ಜಿಲ್ಲೆಯ ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮುಳುಗಡೆಯಾದ ಬಾಗೇವಾಡಿ ಮತಕ್ಷೇತ್ರದಲ್ಲಿ ಬರುವ 18 ಗ್ರಾಮಗಳಿಗೆ ಆಶ್ರಯ ಮತ್ತು ಅಂಬೇಡ್ಕರ್ ಯೋಜನೆಯಡಿ ಮನೆಗಳನ್ನು ಕೊಡುವ ವಿಚಾರ ಸರ್ಕಾರಕ್ಕೆ ಇದೆಯೇ :

ಆ) ಈ ವಿಚಾರದಲ್ಲಿ ಆಗಿರುವ ಪ್ರಗತಿ ಏನು ?

ಶ್ರೀ ಸಿ.ಆರ್. ಸಗೀರ್ ಅಹ್ಮದ್ (ವಸತಿ ಸಚಿವರು):

ಅ) ಹೌದು